"ಅತೀ ತುರ್ತು"

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**"ಕನ್ನಡ ಕಾಯಕ ವರ್ಷ 2020-21"**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆಃ ಕಾಶಿಇ/ಶೈವಿ/72/ಶುಲ್ಕ ವಿನಾಯಿತಿ/2020-21 ದಿನಾಂಕ: 03.03.2021

# ಸುತ್ತೋಲೆ

ವಿಷಯ: 2020-21ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಶುಲ್ಕ ಮರುಭರಿಕೆ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 115 ಹೆಚ್‌ಪಿಸಿ 2020 ಬೆಂಗಳೂರು ದಿನಾಂಕ:12.08.2020.

* * * * * *

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, 2020-21ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ತರಗತಿಗಳಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿನಿಯರ ಶುಲ್ಕ ಮರುಭರಿಕೆ ಮಾಡುವ ಸಂಬಂಧ ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಅಗತ್ಯ ವಿವರಗಳ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿರುವ Google Form ನಲ್ಲಿ ಪ್ರಾಂಶುಪಾಲರುಗಳು ವೈಯುಕ್ತಿಕ ಗಮನಹರಿಸಿ ಯಾವುದೇ ಕಾರಣಕ್ಕೂ ವಿಳಂಬವಾಗದಂತೆ ಕಡ್ಡಾಯವಾಗಿ ದಿನಾಂಕ:05.03.2021 ರ ಸಂಜೆ:5.00ರೊಳಗಾಗಿ upload ಮಾಡಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

**ವಿಶೇಷ ಸೂಚನೆ:**

1. ಪ್ರಥಮ ವರ್ಷದ ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಪ್ರಸ್ತುತ ವರ್ಷದಲ್ಲಿ ವಿವಿಧ ವಿದ್ಯಾರ್ಥಿವೇತನಗಳಿಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿನಿಯರನ್ನು ಹೊರತುಪಡಿಸಿ ಶುಲ್ಕ ಮರುಪಾವತಿಗೆ ಅರ್ಹ ವಿದ್ಯಾರ್ಥಿನಿಯರ ಸಂಖ್ಯೆ.
2. ದ್ವಿತೀಯ ವರ್ಷದ ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಕಳೆದ ವರ್ಷದಲ್ಲಿ ವಿವಿಧ ವಿದ್ಯಾರ್ಥಿವೇತನಗಳನ್ನು ಪಡೆದಿರುವ ವಿದ್ಯಾರ್ಥಿನಿಯರನ್ನು ಹೊರತು ಪಡಿಸಿ ಶುಲ್ಕ ಮರುಪಾವತಿಗೆ ಅರ್ಹ ವಿದ್ಯಾರ್ಥಿನಿಯರ ಸಂಖ್ಯೆ.
3. ತೃತೀಯ ವರ್ಷದ ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಕಳೆದ ವರ್ಷದಲ್ಲಿ ವಿವಿಧ ವಿದ್ಯಾರ್ಥಿವೇತನಗಳನ್ನು ಪಡೆದಿರುವ ವಿದ್ಯಾರ್ಥಿನಿಯರನ್ನು ಹೊರತು ಪಡಿಸಿ ಶುಲ್ಕ ಮರುಪಾವತಿಗೆ ಅರ್ಹ ವಿದ್ಯಾರ್ಥಿನಿಯರ ಸಂಖ್ಯೆ.

<u>ಸ್ನಾತಕ ಪದವಿ ವಿದ್ಯಾರ್ಥಿನಿಯರುಗಳಿಗೆ</u>

4. ಪ್ರಥಮ ಪದವಿ ವಿದ್ಯಾರ್ಥಿನಿಯರು ಪ್ರವೇಶಾತಿ ಶುಲ್ಕದಲ್ಲಿ ಸರ್ಕಾರಿ ಶುಲ್ಕ ಪ್ರಥಮ ವರ್ಷಕ್ಕೆ ಗರಿಷ್ಠ ರೂ.270/- ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.
5. ದ್ವಿತೀಯ ಮತ್ತು ತೃತೀಯ ಪದವಿ ವಿದ್ಯಾರ್ಥಿನಿಯರು ಪ್ರವೇಶಾತಿ ಶುಲ್ಕದಲ್ಲಿ ಸರ್ಕಾರಿ ಶುಲ್ಕ ಪ್ರಥಮ ವರ್ಷಕ್ಕೆ ಗರಿಷ್ಠ ರೂ.130/- ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

..2

6. ಪದವಿ ವಿದ್ಯಾರ್ಥಿನಿಯರಿಗೆ ಅರೆ ಸರ್ಕಾರಿ ಶುಲ್ಕ ಗರಿಷ್ಠ ರೂ.410.00 ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

7. ಪದವಿ ವಿದ್ಯಾರ್ಥಿನಿಯರು ಪ್ರವೇಶ / ಎರಡು ಸೆಮಿಸ್ಟರ್‌ಗಳ ಪರೀಕ್ಷಾ ಶುಲ್ಕ ಪಾವತಿಸಿರುವ ವಿಶ್ವವಿದ್ಯಾಲಯ ಶುಲ್ಕಗಳಲ್ಲಿ (ಪರೀಕ್ಷಾ ಪ್ರಮಾಣ ಪತ್ರ ಮತ್ತು ಘಟಿಕೋತ್ಸವ ಶುಲ್ಕಗಳನ್ನು ಹೊರತುಪಡಿಸಿ) ವಾರ್ಷಿಕ ಗರಿಷ್ಠ ರೂ.3,500.00 ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

<u>ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯರುಗಳಿಗೆ</u>

8. ಪ್ರಥಮ ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯರು ಪ್ರವೇಶಾತಿ ಶುಲ್ಕದಲ್ಲಿ ಸರ್ಕಾರಿ ಶುಲ್ಕ ಪ್ರಥಮ ವರ್ಷಕ್ಕೆ ಗರಿಷ್ಠ ರೂ.1350/- ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

9. ದ್ವಿತೀಯ ಮತ್ತು ತೃತೀಯ ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯರು ಪ್ರವೇಶಾತಿ ಶುಲ್ಕದಲ್ಲಿ ಸರ್ಕಾರಿ ಶುಲ್ಕ ಪ್ರಥಮ ವರ್ಷಕ್ಕೆ ಗರಿಷ್ಠ ರೂ.1130/- ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

10. ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯರಿಗೆ ಅರೆ ಸರ್ಕಾರಿ ಶುಲ್ಕ ಗರಿಷ್ಠ ರೂ.810.00 ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

11. ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿಯರು ಪ್ರವೇಶ / ಎರಡು ಸೆಮಿಸ್ಟರ್‌ಗಳ ಪರೀಕ್ಷಾ ಶುಲ್ಕ ಪಾವತಿಸಿರುವ ವಿಶ್ವವಿದ್ಯಾಲಯ ಶುಲ್ಕಗಳಲ್ಲಿ (ಪರೀಕ್ಷಾ ಪ್ರಮಾಣ ಪತ್ರ ಮತ್ತು ಘಟಿಕೋತ್ಸವ ಶುಲ್ಕಗಳನ್ನು ಹೊರತುಪಡಿಸಿ) ವಾರ್ಷಿಕ ಗರಿಷ್ಠ ರೂ.5,500.00 ಅಥವಾ ವಿದ್ಯಾರ್ಥಿನಿಯರು ಪಾವತಿಸಿರುವ ವಾಸ್ತವಿಕ ಶುಲ್ಕ ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಪರಿಗಣಿಸುವುದು.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ,

1) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4) ಕಛೇರಿ ಪ್ರತಿ.